ಕರ್ನಾಟಕ ಸರ್ಕಾರ

ಸಂಖ್ಯೆ:ಹಿಂವಕನಿ:ಡಿಬಿಟಿ-3:ಸಿಆರ್-53:2014-15

ಆಯುಕ್ತರ ಕಛೇರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ನಂ.16/ಡಿ ದೇವರಾಜ ಅರಸು ಭವನ,
3ನೇ ಮಹಡಿ, ಮಿಲ್ಲರ್ಸ್ ಕೆರೆ ಅಂಗಳ,
ವಸಂತನಗರ ಬೆಂಗಳೂರ-52,
ದಿನಾಂಕ:12-01-2015.

ಗೆ:
ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ
ಮಲ್ಲೇಶ್ವರಂ
ಬೆಂಗಳೂರು-560012.

ಮಾನ್ಯರೆ,

**ವಿಷಯ:** ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮುಖಾಂತರ ಆಯ್ಕೆ ಮಾಡಿಕೊಳ್ಳುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಮಂಜೂರು ಮಾಡುವ ಕುರಿತು.

**ಉಲ್ಲೇಖ:**
1) ತಮ್ಮ ಪತ್ರ ಸಂಖ್ಯೆ: ಸಇಡಿ/ಕೆಇಎ/ಸಿಇಟಿ2015/01/14-15 ದಿನಾಂಕ:15-12-2014 ಹಾಗೂ 05-01-2015.
2) ಸಂ: ಹಿಂವಕ 589 ಬಿಎಂಎಸ್ 2013 ದಿನಾಂಕ:05-10-2013 & ತಿದ್ದುಪಡಿ ಆದೇಶ ದಿನಾಂಕ:06-08-2014

*******

ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಬೆಂಗಳೂರು-560012
ಸಂಖ್ಯೆ.......
ದಿನಾಂಕ.......

ಮೇಲ್ಕಂಡ ವಿಷಯಕ್ಕೆ ಸಂಬಧಿಸಿದಂತೆ ಉಲ್ಲೇಖ (1)ರ ನಿಮ್ಮ ಪತ್ರವನ್ನು ಪರಿಶೀಲಿಸಲಾಗಿದೆ. ಉಲ್ಲೇಖ (2)ರ ಸರ್ಕಾರದ ಆದೇಶದಂತೆ 2014-15 ನೇ ಸಾಲಿನಲ್ಲಿ ಶುಲ್ಕ ವಿನಾಯಿತಿ ಮರು ಪಾವತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಅರ್ಹ ವಿದ್ಯಾರ್ಥಿಗಳಿಗೆ, ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಕಾಲೇಜಿನ ಪ್ರಾಂಶುಪಾಲರ ಬ್ಯಾಂಕ್ ಖಾತೆಗೆ, ಸರ್ಕಾರವು ಸರ್ಕಾರದ ಕಾಲೇಜುಗಳಿಗೆ ನಿಗದಿಪಡಿಸಿರುವ ದರಗಳಂತೆ ಭೋದನಾಶುಲ್ಕ, ಗ್ರಂಥಾಲಯಶುಲ್ಕ, ಕ್ರೀಡಾಶುಲ್ಕ, ಪ್ರಯೋಗಾಲಯಶುಲ್ಕ ಹಾಗೂ ಪರೀಕ್ಷಾ ಶುಲ್ಕಗಳನ್ನು ಹಾಗೂ ಹೆಚ್ಚು ಅಂಕ ಪಡೆದಿರುವ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕವನ್ನು ಮಾತ್ರ ಮರುಪಾವತಿ ಮಾಡಲು ಕ್ರಮವಹಿಸಲಾಗಿದೆ. 2015-16ನೇ ಸಾಲಿನಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಕೆಳಕಂಡಂತೆ ಕ್ರಮ ವಹಿಸಬೇಕಿದೆ.

1. 2015-16ನೇ ಸಾಲಿಗೆ ಸಂಬಂಧಿಸಿದಂತೆ ಸಿ.ಇ.ಟಿ ಪರೀಕ್ಷೆಗೆ ಅರ್ಜಿ ಅಹ್ವಾನಿಸುವ ಸಂದರ್ಭದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮಾಹಿತಿ ಪುಸ್ತಕದಲ್ಲಿ (prospectus) ಈ ಕೆಳಗಿನ ಅಂಶಗಳನ್ನು ಸೇರಿಸಿ ವಿದ್ಯಾರ್ಥಿಗಳಿಗೆ ಸೂಚನೆ ನೀಡಬೇಕಾಗಿರುತ್ತದೆ.

   ಅ) "ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ಮರು ಪಾವತಿ ಸಂಬಂಧ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ, ಹಾಗೂ ಪ್ರವರ್ಗ-2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ ಆದಾಯ ಮಿತಿ ನಿಗದಿಪಡಿಸಿದ್ದು, ಪ್ರವೇಶದ ಸಮಯದಲ್ಲಿ ನಿಗದಿತ ಆದಾಯದ ಮಿತಿಯೊಳಗಿರುವ ವಿದ್ಯಾರ್ಥಿಗಳಿಗೆ ಸರ್ಕಾರವು, ಸರ್ಕಾರದ ಕಾಲೇಜುಗಳಿಗೆ ನಿಗದಿಪಡಿಸಿರುವ ದರಗಳಂತೆ ಭೋದನಾಶುಲ್ಕ, ಗ್ರಂಥಾಲಯಶುಲ್ಕ, ಕ್ರೀಡಾಶುಲ್ಕ, ಪ್ರಯೋಗಾಲಯಶುಲ್ಕ, ಪರೀಕ್ಷಾ ಶುಲ್ಕಗಳಿಂದ ವಿನಾಯಿತಿ ನೀಡಲಾಗುವುದು.

   ಆ) ನಿಗದಿತ ಆದಾಯದ ಮಿತಿಯೊಳಗಿರುವ ವಿದ್ಯಾರ್ಥಿಗಳಿಗೆ ಸರ್ಕಾರವು, ಸರ್ಕಾರದ ಕಾಲೇಜುಗಳಿಗೆ ನಿಗದಿಪಡಿಸಿರುವ ದರಗಳಂತೆ ಭೋದನಾಶುಲ್ಕ, ಗ್ರಂಥಾಲಯಶುಲ್ಕ, ಕ್ರೀಡಾಶುಲ್ಕ, ಪ್ರಯೋಗಾಲಯಶುಲ್ಕ, ಪರೀಕ್ಷಾ ಶುಲ್ಕಗಳು ಹಾಗೂ ಹೆಚ್ಚು ಅಂಕ ಪಡೆದಿರುವ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕವನ್ನು (ಸರ್ಕಾರವು, ಸರ್ಕಾರದ ಕಾಲೇಜುಗಳಿಗೆ ನಿಗದಿಪಡಿಸಿರುವ ದರಗಳಂತೆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮರುಪಾವತಿಸಲಾಗುತ್ತದೆ.

ಇ) ಮೇಲ್ಕಂಡ ಶುಲ್ಕಗಳ ಮೊತ್ತದಿಂದ ವಿದ್ಯಾರ್ಥಿಗಳು ವಿನಾಯಿತಿ ಪಡೆಯಲು ಕಡ್ಡಾಯವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಶುಲ್ಕ ವಿನಾಯಿತಿ ಮರುಪಾವತಿಗಾಗಿ ಆನ್‌ಲೈನ್ ಮೂಲಕ ಆಹ್ವಾನಿಸುವ ಇ-ಪಾಸ್ ನಲ್ಲಿ ಅರ್ಜಿಯನ್ನು ಸಲ್ಲಿಸತಕ್ಕದ್ದು.

ಈ) ಒಂದು ವೇಳೆ ಶುಲ್ಕ ವಿನಾಯಿತಿ ಮಂಜೂರಾತಿ ಕೋರಿ ಆನ್‌ಲೈನ್ ಮೂಲಕ ಇ-ಪಾಸ್ ನಲ್ಲಿ ಅರ್ಜಿ ಸಲ್ಲಿಸದೇ ಇದ್ದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ನೀಡುವ ಶುಲ್ಕಗಳನ್ನು ಪಡೆಯಲು ಅರ್ಹರಿರುವುದಿಲ್ಲ. ಎಲ್ಲಾ ಶುಲ್ಕಗಳನ್ನು ವಿದ್ಯಾರ್ಥಿಗಳೇ ಪಾವತಿಸಬೇಕಾಗಿರುತ್ತದೆ" ಎಂಬ ಸೂಚನೆಗಳನ್ನು ವಿದ್ಯಾರ್ಥಿಗಳಿಗೆ ನೀಡುವಂತೆ ಕೋರಿದೆ.

2. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮುಖಾಂತರ 2015-16ನೇ ಸಾಲಿನಿಂದ ಶುಲ್ಕ ವಿನಾಯಿತಿ ಮಂಜೂರಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿ, ವಿದ್ಯಾರ್ಥಿಗಳ ಅರ್ಹತೆಯನ್ನಾಧರಿಸಿ ಮೇಲ್ಕಾಣಿಸಿದ ಶುಲ್ಕಗಳನ್ನು ಮಂಜೂರು ಮಾಡಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಕಾಲೇಜುಗಳ ಪ್ರಾಂಶುಪಾಲರ ಬ್ಯಾಂಕ್ ಖಾತೆಗೆ ಜಮಾ ಗೊಳಿಸಲಾಗುವುದು ಎಂಬ ವಿಷಯವನ್ನು ತಮ್ಮ ಗಮನಕ್ಕೆ ತರಲಾಗಿದೆ.

ತಮ್ಮ ವಿಶ್ವಾಸಿ

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
12/11/16 ಬೆಂಗಳೂರು.